# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## <u>ಅಧಿಸೂಚನೆ</u>

**ಸಂಖ್ಯೆ: ಕವಿಪ್ರನಿನಿ/ಬಿ16/40360/2016-17** **ದಿನಾಂಕ: 18.11.2016**

ವಿಷಯ: ಕನ್ನಡ ಭಾಷಾ ಪರೀಕ್ಷೆಯ ಇ-ಅಡ್ಮಿಟ್ ಪತ್ರವನ್ನು (TAT) ಡೌನ್‌ಲೋಡ್ ಮಾಡಿಕೊಳ್ಳುವ ಕುರಿತು.

ಉಲ್ಲೇಖ: ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17 ದಿನಾಂಕ: 08.09.2016.

*****

ನಿಗಮದ, ದಿನಾಂಕ: 08.09.2016 ರ ಉದ್ಯೋಗ ಪ್ರಕಟಣೆಯನ್ವಯ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ವಿವಿಧ ಎಸ್ಕಾಂಗಳಲ್ಲಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸಹಾಯಕ ಇಂಜಿನಿಯರ್(ವಿದ್ಯುತ್/ಸಿವಿಲ್) ಮತ್ತು ಸಹಾಯಕ ಲೆಕ್ಕಾಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದ ಅರ್ಹ ಅಭ್ಯರ್ಥಿಗಳಿಗೆ, ದಿನಾಂಕ: **03.12.2016** ರಂದು ಮಧ್ಯಾಹ್ನ 2 ಗಂಟೆಯಿಂದ ರಿಂದ 5 ಗಂಟೆಯವರೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗುವುದು.

ಸದರಿ ಹುದ್ದೆಗೆ ಅರ್ಜಿಯನ್ನು ಸಲ್ಲಿಸಿದ್ದ ಅಭ್ಯರ್ಥಿಗಳ ಪೈಕಿ ಎಸ್.ಎಸ್.ಎಲ್.ಸಿ / 10ನೇ ತರಗತಿಯಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ವ್ಯಾಸಂಗ ಮಾಡದೆ ಇರುವ ಅಥವಾ ಎಸ್.ಎಸ್.ಎಲ್.ಸಿ ಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆ/ದ್ವಿತೀಯ ಭಾಷೆ ಅಥವಾ ಐಚ್ಛಿಕ ವಿಷಯವನ್ನಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗದ ಅಭ್ಯರ್ಥಿಗಳಿಗೆ <u>**ಕನ್ನಡ ಭಾಷಾ ಪರೀಕ್ಷೆಯನ್ನು ಬೆಂಗಳೂರಿನಲ್ಲಿ ಮಾತ್ರ ನಡೆಸಲಾಗುವುದು.**</u>

ದಿನಾಂಕ: **22.11.2016** ರ ನಂತರ ಇ-ಅಡ್ಮಿಟ್ ಪತ್ರಗಳನ್ನು ಕವಿಪ್ರನಿನಿ ಮತ್ತು ಎಸ್ಕಾಂಗಳ ವೆಬ್‌ಸೈಟ್ www.kptcl.com www.bescom.org, www.cescmysore.org, www.hescom.co.in, www.gescom.in ಗಳಲ್ಲಿ ಲಭ್ಯಪಡಿಸಲಾಗುವುದು. ಅರ್ಹ ಅಭ್ಯರ್ಥಿಗಳು ತಿಳಿಸಲಾದ ವೆಬ್‌ಸೈಟ್‌ಗಳಿಗೆ ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮದಿನಾಂಕದೊಂದಿಗೆ ಲಾಗ್‌ಆನ್ ಮಾಡುವುದರೊಂದಿಗೆ ಇ-ಅಡ್ಮಿಟ್ ಪತ್ರವನ್ನು ಪಡೆದುಕೊಳ್ಳಬಹುದಾಗಿದೆ. ನಿಗದಿಪಡಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಇ-ಅಡ್ಮಿಟ್ ಪತ್ರದ ಮುದ್ರಿತ ಪ್ರತಿಯನ್ನು ಹಾಜರುಪಡಿಸತಕ್ಕದ್ದು.

ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆಗಾಗಿ ಪರಿಗಣಿಸಲಾಗುವುದು.

ಪರೀಕ್ಷಾ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವ ಸಂದರ್ಭದಲ್ಲಿ ತೊಂದರೆ ಉಂಟಾದಲ್ಲಿ, ದಿನಾಂಕ: **02.12.2016** ರ ಒಳಗೆ ಕಚೇರಿಯ ಕೆಲಸದ ವೇಳೆಯಲ್ಲಿ ಈ ಕೆಳಕಂಡ ಸಹಾಯವಾಣಿಗಳನ್ನು ಸಂಪರ್ಕಿಸಬಹುದಾಗಿದೆ.

| ಕಂಪನಿಯ ಹೆಸರು | ಸಹಾಯವಾಣಿ ಸಂಖ್ಯೆ |
|---|---|
| ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕವಿಪ್ರನಿನಿ) | 080-22211527 Ext 3789, 3872 |
| ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಬೆಸ್ಕಾಂ) | 080-22085061 |
| ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್) | 0821-2343384 |
| ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಹೆಸ್ಕಾಂ) | 0836-2223867, 0836-2223865 |
| ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಸ್ಕಾಂ) | 08472-256647, 08472-239004 |
| ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು | 080-23460460 |

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ನಿಗಮ ಕಾರ್ಯಾಲಯ, ಕವಿಪ್ರನಿನಿ,
ಕಾವೇರಿ ಭವನ, ಬೆಂಗಳೂರು.